ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ ಮತ್ತು ನ್ಯಾಕ್ ನಿಂದ 'ಬಿ' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440, ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 Email: jsscwk@gmail.com www.jsscwkgl.org

**ಪ್ರಕಟಣೆ ಕೃಪೆಗಾಗಿ**

## ಜೆಎಸ್‌ಎಸ್ ವಿದ್ಯಾರ್ಥಿನಿಯರಿಂದ ಸ್ವಚ್ಛತಾ ಕಾರ್ಯ

ಕೊಳ್ಳೇಗಾಲ: 16.2.2019 ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಸ್ವಚ್ಛತಾ ಅಭಿಯಾನದ ಅಂಗವಾಗಿ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿನಿಯರು ಸ್ವಚ್ಛತಾ ಕಾರ್ಯ ನಡೆಸಿಕೊಟ್ಟರು.

ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿದ್ದ ಸ್ವಚ್ಛತಾ ಸಾಪ್ತಾಹಿಕ ಅಭಿಯಾನಕ್ಕೆ ಪ್ರಾಚಾರ್ಯ ಪ್ರೊ.ಉಮೇಶ ಚಾಲನೆ ನೀಡಿದರು.

ನಂತರ ಮಾತನಾಡಿ ಸ್ವಚ್ಛತೆ ಮತ್ತು ಆರೋಗ್ಯ ನಾಣ್ಯದ ಎರಡು ಮುಖಗಳಿದ್ದಂತೆ ಒಂದರಿಂದ ಮತ್ತೊಂದು. ಒಂದಿಲ್ಲದೆ ಮತ್ತೊಂದಿಲ್ಲ. ಸುಸ್ಥಿತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಉತ್ತಮ ಆರೋಗ್ಯ ಹೊಂದಬೇಕು. ಸ್ವಚ್ಛತೆಯಿದ್ದಲ್ಲಿ ಉತ್ತಮ ಆರೋಗ್ಯ ತಪ್ಪಿದಲ್ಲಿ ಅನೈರ್ಮಲ್ಯ, ಅನಾರೋಗ್ಯ ಖಾತ್ರಿ. ಆದ್ದರಿಂದ ನಾವೆಲ್ಲರೂ ನಮ್ಮ ಮನೆಗಳಷ್ಟೇ ಅಲ್ಲದೆ ನಮ್ಮ ಸುತ್ತ ಮುತ್ತಲಿನ ಪರಿಸರವನ್ನು ಚೊಕ್ಕಟವಾಗಿಟ್ಟುಕೊಂಡು ಸುತ್ತ ಮುತ್ತಲಿನ ಜನತೆಯನ್ನು ಆ ಬಗ್ಗೆ ಜಾಗೃತಗೊಳಿಸಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿನಿಯರು ಮತ್ತು ಅಧ್ಯಾಪಕರು ಕ್ಯಾಂಪಸ್‌ನಲ್ಲಿನ ಕಸ, ಇತರೆ ತ್ಯಾಜ್ಯ ವಸ್ತುಗಳನ್ನು ತೆಗೆದು ಸ್ವಚ್ಛಗೊಳಿಸಿದರು. ರಾಷ್ಟ್ರೀಯ ಸೇವಾ ಯೊಜನೆ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ.ಬಸವರಾಜು, ಸ್ವಚ್ಛತಾ ಸಮಿತಿ ಸಂಚಾಲಕ ಪ್ರೊ.ಮಂಜುನಾಥರವರು ಹಾಜರಿದ್ದರು.

ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ವಿದ್ಯಾರ್ಥಿನಿಯರು. ಚಿತ್ರದಲ್ಲಿ ಪ್ರಾಚಾರ್ಯ ಪ್ರೊ.ಉಮೇಶ ಹಾಗೂ ಅಧ್ಯಾಪಕರನ್ನು ಕಾಣಬಹುದು.




ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ವಿದ್ಯಾರ್ಥಿನಿಯರು

